**All India Radio: Bangalore**
**National Bulletin In Kannada**
**11.04.2025 13.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><><><>**

ಮುಖ್ಯಾಂಶಗಳು

1. ವಾರಾಣಸಿಯಲ್ಲಿಂದು ೩ ಸಾವಿರ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ
2. ಸ್ಲೋವಾಕಿಯಾ ವಿಶ್ವವಿದ್ಯಾಲಯದಿಂದ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ಗೌರವ ಡಾಕ್ಟರೇಟ್ ಪ್ರದಾನ
3. ಒಡಿಶಾದಲ್ಲಿ ಆಯುಷ್ಮಾನ್ ಭಾರತ್-ಪ್ರಧಾನಮಂತ್ರಿ ಜನ ಆರೋಗ್ಯ ಯೋಜನೆ ಉದ್ಘಾಟಿಸಲಿರುವ ಕೇಂದ್ರ ಸಚಿವ ಜೆ.ಪಿ.ನಡ್ಡಾ
4. ಬಿಲ್ಲುಗಾರಿಕೆ ವಿಶ್ವಕಪ್: ಹಂತ೧ ರಲ್ಲಿ ಭಾರತದ ರಿಕರ್ವ್ ತಂಡ ಫೈನಲ್‌ಗೆ ಲಗ್ಗೆ
5. ಐಪಿಎಲ್ ಟಿ-೨೦ ಕ್ರಿಕೆಟ್: ಇಂದು ಚೆನ್ನೈ ಸೂಪರ್ ಕಿಂಗ್ಸ್ - ಕೋಲ್ಕತ್ತಾ ನೈಟ್ ರೈಡರ್ಸ್ ಮುಖಾಮುಖಿ

<><><><>

ಪ್ರಧಾನಿ ನರೇಂದ್ರ ಮೋದಿ ಅವರಿಂದು ವಾರಣಾಸಿಯ ಮೆಹದಿಗಂಜ್‌ನಲ್ಲಿ ಮೂರು ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ೪೪ ಯೋಜನೆಗಳಿಗೆ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಿದರು. ಆ ಪ್ರದೇಶದ ಸರ್ವತೋಮುಖ ಬೆಳವಣಿಗೆಯನ್ನು ಖಚಿತಪಡಿಸುವ ಗುರಿಯೊಂದಿಗೆ ರಸ್ತೆ ಮೂಲಸೌಕರ್ಯ, ವಿದ್ಯುತ್, ಶಿಕ್ಷಣ ಮತ್ತು ಪ್ರವಾಸೋದ್ಯಮದ ಅಭಿವೃದ್ಧಿ ಸೇರಿದಂತೆ ವಿವಿಧ ಕ್ಷೇತ್ರಗಳಿಗೆ ಸಂಬಂಧಿಸಿದ ಯೋಜನೆಗಳಿಗೆ ಚಾಲನೆ ನೀಡಲಾಗಿದೆ. ಬಳಿಕ ನಡೆದ ಸಾರ್ವಜನಿಕ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ನಗರ ಕಂಡಿರುವ ತ್ವರಿತ ಪ್ರಗತಿಯ ಕುರಿತು ಪ್ರಸ್ತಾಪಿಸಿ, ಕಾಶಿ ಇನ್ನು ಪ್ರಾಚೀನತೆಯ ಸಂಕೇತ ಮಾತ್ರವಲ್ಲದೇ, ಪ್ರಗತಿಯ ಮಾದರಿಯಾಗಿ ಹೊರಹೊಮ್ಮಿದೆ ಎಂದು ಹೇಳಿದರು. ಮೂಲಸೌಕರ್ಯ ಅಭಿವೃದ್ಧಿ, ಧಾರ್ಮಿಕ ಪ್ರವಾಸೋದ್ಯಮ ಮತ್ತು ನಾಗರಿಕ ಸೌಲಭ್ಯಗಳ ಸುಧಾರಣೆ ಬಗ್ಗೆ ಶ್ಲಾಘನೆ ವ್ಯಕ್ತಪಡಿಸಿದ ಅವರು, ಇದು ಪ್ರಾಚೀನ ನಗರವನ್ನು ಆಧುನಿಕ ನಗರ ಕೇಂದ್ರವಾಗಿ ಮರುರೂಪಿಸಿದೆ ಎಂದರು.

**ಧ್ವನಿ : ಪ್ರಧಾನಿ ನರೇಂದ್ರ ಮೋದಿ**

ಕಾರ್ಯಕ್ರಮದಲ್ಲಿ ಪ್ರಧಾನಿ, ೭೦ ವರ್ಷಕ್ಕಿಂತ ಮೇಲ್ಪಟ್ಟ ಮೂವರು ವೃದ್ಧರಿಗೆ ಆಯುಷ್ಮಾನ್ ಕಾರ್ಡ್‌ಗಳು, ಮೂರು ಭೌಗೋಳಿಕ ಸೂಚನೆ - ಜಿಐಗಳಿಗೆ ಪ್ರಮಾಣಪತ್ರಗಳನ್ನು ಹಸ್ತಾಂತರಿಸಿದರು. ಇದೇ ವೇಳೆ ಬನಾಸ್ ಡೈರಿ ಅಮುಲ್ ನೊಂದಿಗೆ ಸಂಬಂಧ ಹೊಂದಿರುವ ರಾಜ್ಯದ ಡೈರಿ ರೈತರಿಗೆ ಆರ್ಥಿಕ ಕೊಡುಗೆಯ ರೂಪದಲ್ಲಿ ೧೦೬ ಕೋಟಿ ರೂಪಾಯಿಗಳನ್ನು ವರ್ಗಾಯಿಸಲಾಯಿತು.

<><><><>

ಸ್ಲೋವಾಕಿಯಾ ಪ್ರವಾಸದಲ್ಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ ಸ್ಲೋವಾಕಿಯಾದ ನಿಟ್ರಾದಲ್ಲಿರುವ ಕಾನ್ಸ್ಟಂಟೈನ್ ದಿ ಫಿಲಾಸಫರ್ ವಿಶ್ವವಿದ್ಯಾಲಯ ಗೌರವ ಡಾಕ್ಟರೇಟ್, ಆನರಿಸ್ ಕೌಸಾ ಡಾ. ಹೆಚ್. ಸಿ. ಪದವಿಯನ್ನು ಪ್ರದಾನ ಮಾಡಿ ಗೌರವಿಸಿದೆ. ಸಾರ್ವಜನಿಕ ಸೇವೆ ಮತ್ತು ಆಡಳಿತದಲ್ಲಿ ಅವರ ವಿಶಿಷ್ಟ ಕೊಡುಗೆ, ಸಾಮಾಜಿಕ ನ್ಯಾಯ, ಶಿಕ್ಷಣ, ಮಹಿಳೆಯರ ಸಬಲೀಕರಣ ಮತ್ತು ಸಾಂಸ್ಕೃತಿಕ ಮತ್ತು ಭಾಷಾ ವೈವಿಧ್ಯತೆಯ ಸಂರಕ್ಷಣೆ ಮತ್ತು ಉತ್ತೇಜನಕ್ಕೆ ನೀಡಿದ ಕೊಡುಗೆಯನ್ನು ಗುರುತಿಸಿ ರಾಷ್ಟ್ರಪತಿ ಅವರಿಗೆ ಆನರಿಸ್ ಕೌಸಾ ಡಾಕ್ಟರೇಟ್ ನೀಡಲಾಯಿತು. ಬಳಿಕ ಮಾತನಾಡಿದ ರಾಷ್ಟ್ರಪತಿಗಳು, ಶಿಕ್ಷಣ, ಬದಲಾವಣೆಯ ಒಂದು ಸಾಧನವಾಗಿದ್ದು, ಭಾರತದ ನೀತಿಗಳ ಕೇಂದ್ರಬಿಂದುವಾಗಿದೆ. ಸಂಶೋಧನೆ, ನಾವೀನ್ಯತೆ ಮತ್ತು ಜಾಗತಿಕ ಸಹಯೋಗದ ಮೇಲೆ ಕೇಂದ್ರೀಕರಿಸಿ, ಯುವಶಕ್ತಿಯನ್ನು ಬಳಸಿಕೊಳ್ಳಲು ನೂತನ ಶಿಕ್ಷಣ ನೀತಿಯನ್ನು ವಿನ್ಯಾಸಗೊಳಿಸಲಾಗಿದೆ ಎಂದರು. ಸ್ಲೋವಾಕಿಯಾದ ಅಧ್ಯಕ್ಷ ಪೀಟರ್ ಪೆಲ್ಲಿಗ್ರಿನಿ ಮಾತನಾಡಿ, ಭಾರತದ ರಾಷ್ಟ್ರಪತಿಗಳ ಸ್ಲೋವಾಕಿಯಾ ಭೇಟಿ, ಉಭಯ ರಾಷ್ಟ್ರಗಳ ನಡುವಿನ ಬೆಳೆಯುತ್ತಿರುವ ಮತ್ತು ಕ್ರಿಯಾತ್ಮಕ ಸಂಬಂಧದಲ್ಲಿ ಅರ್ಥಪೂರ್ಣ ಮೈಲಿಗಲ್ಲಾಗಿದೆ ಎಂದು ಹೇಳಿದರು.

<><><><>

ಏಕೀಕೃತ ಆರೋಗ್ಯ ವಿಮಾ ಯೋಜನೆಯಾದ ಆಯುಷ್ಮಾನ್ ಭಾರತ್-ಪ್ರಧಾನಮಂತ್ರಿ ಜನ ಆರೋಗ್ಯ ಯೋಜನೆಯನ್ನು ಒಡಿಶಾ ಸರ್ಕಾರ ಪ್ರಾರಂಭಿಸಲಿದೆ. ಕಟಕ್‌ನಲ್ಲಿಂದು ನಡೆಯುವ ಈ ಕಾರ್ಯಕ್ರಮದಲ್ಲಿ ಕೇಂದ್ರ ಆರೋಗ್ಯ ಸಚಿವ ಜೆ.ಪಿ. ನಡ್ಡಾ ಈ ಯೋಜನೆಗೆ ಚಾಲನೆ ನೀಡಲಿದ್ದಾರೆ. 'ಆಯುಷ್ಮಾನ್ ಭಾರತ್-ಪ್ರಧಾನ ಮಂತ್ರಿ ಜನ ಆರೋಗ್ಯ ಯೋಜನೆಯ ಜೊತೆಗೆ, ಹಿರಿಯ ನಾಗರಿಕರನ್ನು ಕೇಂದ್ರೀಕರಿಸಿ ರಾಜ್ಯ ಸರ್ಕಾರದ ಆರೋಗ್ಯ ಯೋಜನೆಯಾದ ಗೋಪಬಂಧು ಜನ ಆರೋಗ್ಯ ಯೋಜನೆ ಮತ್ತು ಹೊಸದಾಗಿ ಪರಿಚಯಿಸಲಾದ ಆಯುಷ್ಮಾನ್ ವಯೋ-ವಂದನ ಯೋಜನೆಯನ್ನು ಸಹ ಈ ಉಪಕ್ರಮದಲ್ಲಿ ಸಂಯೋಜಿಸಲಾಗಿದೆ. ಇದರಿಂದಾಗಿ ಒಂದು ಕೋಟಿ ಎಂಟು ಲಕ್ಷ ಕುಟುಂಬಗಳ ಸುಮಾರು ಮೂರು ಕೋಟಿ ಐವತ್ತೆರಡು ಲಕ್ಷ ಜನರು ಸಂಯೋಜಿತ ಯೋಜನೆಯಡಿಯಲ್ಲಿ ಒಳಗೊಳ್ಳಲಿದ್ದಾರೆ. ಫಲಾನುಭವಿಗಳು ದೇಶಾದ್ಯಂತ ೨೯ ಸಾವಿರಕ್ಕೂ

ಹೆಚ್ಚು ಸರ್ಕಾರಿ ಮತ್ತು ಖಾಸಗಿ ಆಸ್ಪತ್ರೆಗಳಲ್ಲಿ ಉಚಿತ, ನಗದುರಹಿತ ಚಿಕಿತ್ಸೆಯನ್ನು ಪಡೆಯುತ್ತಾರೆ.

<><><>

ಪ್ರಧಾನಮಂತ್ರಿ ಆಯುಷ್ಮಾನ್ ಭಾರತ್ ಆರೋಗ್ಯ ಮೂಲಸೌಕರ್ಯ ಮಿಷನ್ ಅನ್ನು ಜಾರಿಗೆ ತಂದಿರುವುದಕ್ಕಾಗಿ ದೆಹಲಿ ಸರ್ಕಾರವನ್ನು ಪ್ರಧಾನಿ ನರೇಂದ್ರ ಮೋದಿ ಶ್ಲಾಘಿಸಿದ್ದಾರೆ. ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಅವರ ಸಾಮಾಜಿಕ ಮಾಧ್ಯಮ ಪೋಸ್ಟ್‌ಗೆ ಪ್ರತಿಕ್ರಿಯಿಸಿದ ಅವರು, ಇದು ದೆಹಲಿಯ ಆರೋಗ್ಯ ಕ್ಷೇತ್ರಕ್ಕೆ ಸಂಬಂಧಿಸಿದ ಒಂದು ಕ್ರಾಂತಿಕಾರಿ ಹೆಜ್ಜೆಯಾಗಿದೆ. ಕೇಂದ್ರ ಮತ್ತು ದೆಹಲಿ ಎರಡನ್ನೂ ಒಳಗೊಂಡ ಆಯುಷ್ಮಾನ್ ಯೋಜನಾ ಮಿಷನ್ ರಾಷ್ಟ್ರ ರಾಜಧಾನಿಯ ಲಕ್ಷಾಂತರ ನಾಗರಿಕರಿಗೆ ಪ್ರಯೋಜನಕಾರಿಯಾಗಲಿದೆ ಎಂದು ಅವರು ಹೇಳಿದ್ದಾರೆ.

<><><>

ಇಂದು ಸಮಾಜ ಸುಧಾರಕ ಮಹಾತ್ಮ ಜ್ಯೋತಿರಾವ್ ಫುಲೆ ಅವರ ಜಯಂತಿ. ಈ ಹಿನ್ನೆಲೆ ಜ್ಯೋತಿರಾವ್ ಫುಲೆ ಅವರಿಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಗೌರವ ಸಲ್ಲಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಅವರು, ಮಾನವೀಯತೆಯ ನಿಜವಾದ ಸೇವಕರಾಗಿದ್ದ ಫುಲೆ ಅವರು, ಸಮಾಜದ ತುಳಿತಕ್ಕೊಳಗಾದ ಮತ್ತು ವಂಚಿತ ವರ್ಗಗಳ ಕಲ್ಯಾಣಕ್ಕಾಗಿ ತಮ್ಮ ಜೀವನವನ್ನು ಮುಡಿಪಾಗಿಟ್ಟರು. ದೇಶಕ್ಕೆ ಅವರ ಅಮೂಲ್ಯ ಕೊಡುಗೆ ಎಲ್ಲಾ ಪೀಳಿಗೆಗೂ ಸ್ಫೂರ್ತಿ ನೀಡುತ್ತದೆ ಎಂದು ತಿಳಿಸಿದ್ದಾರೆ.

<><><>

ಜುಲೈ ೯ ರೊಳಗೆ ಅಮೆರಿಕದೊಂದಿಗೆ ಒಪ್ಪಂದಕ್ಕೆ ಬರಲು ವಿಫಲವಾದ ರಾಷ್ಟ್ರಗಳ ಮೇಲೆ ಪುನಃ ಪ್ರತಿಸುಂಕಗಳನ್ನು ವಿಧಿಸುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಸಂಪುಟ ಸಭೆಯ ನಂತರ, ಉಭಯ ಕಡೆಗಳಿಗೆ ಒಪ್ಪಂದದ ಕುರಿತು ಒಮ್ಮತ ಮೂಡದಿದ್ದರೆ, ಮರಳಿ ಪ್ರತಿ ಸುಂಕದ ನೀತಿಯನ್ನು ಅನುಸರಿಸಬೇಕಾಗುತ್ತದೆ ಎಂದು ಟ್ರಂಪ್ ಹೇಳಿದರು. ಅಮೆರಿಕದ ಸರಕುಗಳ ಮೇಲೆ ಪ್ರತಿಸುಂಕಗಳನ್ನು ವಿಧಿಸದ ಎಲ್ಲಾ ವ್ಯಾಪಾರ ಪಾಲುದಾರ ರಾಷ್ಟ್ರಗಳ ಆಮದುಗಳಿಗೆ ಸುಂಕಗಳನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸುವ ಕುರಿತು ಅಧ್ಯಕ್ಷ ಟ್ರಂಪ್ ಘೋಷಿಸಿದರು.

<><><>

ಅಮೆರಿಕ ಜಗತ್ತನ್ನು ತೊಡಗಿಸಿಕೊಳ್ಳುವ ತನ್ನ ವಿಧಾನವನ್ನು ಮೂಲಭೂತವಾಗಿ ಬದಲಾಯಿಸಿದೆ ಮತ್ತು ಅದರ ಪರಿಣಾಮಗಳು ಪ್ರತಿಯೊಂದು ಕ್ಷೇತ್ರದಲ್ಲೂ ಕಂಡುಬರುತ್ತಿದೆ ಎಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ ಜಾಗತಿಕ ತಂತ್ರಜ್ಞಾನ ಶೃಂಗಸಭೆಯಲ್ಲಿ ಮಾತನಾಡಿದ ಅವರು, ಅಮೆರಿಕ ಅತಿದೊಡ್ಡ ಆರ್ಥಿಕತೆಯಾಗಿರುವುದರಿಂದ

ಮತ್ತು ಅಮೆರಿಕವನ್ನು ಮತ್ತೆ ಶ್ರೇಷ್ಠಗೊಳಿಸುವಲ್ಲಿ ತಂತ್ರಜ್ಞಾನ ದೊಡ್ಡ ಪಾತ್ರವನ್ನು ವಹಿಸುವುದರಿಂದ ತಾಂತ್ರಿಕ ಪರಿಣಾಮಗಳು ಗಂಭೀರವಾಗಿರುತ್ತವೆ. ತಂತ್ರಜ್ಞಾನ, ವ್ಯಾಪಾರವನ್ನು ರಾಷ್ಟ್ರೀಯ ಭದ್ರತೆಗೆ ಮತ್ತಷ್ಟು ಸೂಕ್ಷ್ಮಗೊಳಿಸಿದೆ ಎಂದು ಅವರು ಹೇಳಿದರು.

**ಧ್ವನಿ: ಡಾ.ಎಸ್.ಜೈಶಂಕರ್ ೨೪ ಸೆಕೆಂಡ್‌ಗಳು**

<><><>

ಇದೇ ೧೫ ರಿಂದ ಜುನ್ ೧ರವರೆಗೆ ಅಂದರೆ ೬೧ ದಿನಗಳವರೆಗೆ ಪುದುಚೇರಿ, ಕಾರೈಕಲ್ ಮತ್ತು ಯಾಣಂ ಪ್ರದೇಶಗಳಲ್ಲಿ ವಾರ್ಷಿಕ ಮೀನುಗಾರಿಕೆ ನಿಷೇಧ ಜಾರಿಗೆ ಬರಲಿದೆ.ಮೀನುಗಳ ಸಂತಾನೋತ್ಪತ್ತಿ ಮತ್ತು ಮರುಪೂರಣಕ್ಕೆ ಅವಕಾಶ ನೀಡುವ ಗುರಿಯನ್ನು ಈ ಕಾಲೋಚಿತ ನಿಷೇಧ ಹೊಂದಿದೆ. ಇದು ಸಮುದ್ರ ಪರಿಸರ ವ್ಯವಸ್ಥೆಯ ದೀರ್ಘಕಾಲೀನ ಸುಸ್ಥಿರತೆಯನ್ನು ಖಚಿತಪಡಿಸುತ್ತದೆ.

<><><>

ಕೇರಳದ ತಿರುವನಂತಪುರಂ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಇಂದು ಸಂಜೆ ೪:೪೫ ರಿಂದ ೯ ಗಂಟೆವರೆಗೆ ಐದು ಗಂಟೆಗಳ ಕಾಲ ತಾತ್ಕಾಲಿಕವಾಗಿ ವಿಮಾನ ಕಾರ್ಯಾಚರಣೆಯನ್ನು ಸ್ಥಗಿತಗೊಳಿಸಲಾಗಿದೆ. ದಶಕಗಳಿಂದ ನಡೆದುಕೊಂಡು ಬರುತ್ತಿರುವ ಸಂಪ್ರದಾಯವಾದ ಶ್ರೀ ಪದ್ಮನಾಭಸ್ವಾಮಿ ದೇವಾಲಯದ ಪವಿತ್ರ 'ಪೈಂಕುಣಿ ಆರಟ್ಟು' ಮೆರವಣಿಗೆಯನ್ನು ರನ್‌ವೇ ಮೂಲಕ ಸುಗಮವಾಗಿ ಮುಂದುವರಿಸಲು ಇದು ಉದ್ದೇಶಿಸಲಾಗಿದೆ.

<><><>

ಅಮೆರಿಕದ ಫ್ಲೋರಿಡಾದಲ್ಲಿ ನಡೆದ ಬಿಲ್ಲುಗಾರಿಕೆ ವಿಶ್ವಕಪ್ ಹಂತ ೧ ರ ಪಂದ್ಯದಲ್ಲಿ ಭಾರತದ ಧೀರಜ್ ಬೊಮ್ಮದೇವರ, ಅತನು ದಾಸ್ ಮತ್ತು ತರುಣ್‌ದೀಪ್ ರೈ ಅವರನ್ನೊಳಗೊಂಡ ರಿಕರ್ವ್ ತಂಡ ಫೈನಲ್ ಪ್ರವೇಶಿಸಿದೆ. ಕಳೆದ ರಾತ್ರಿ ನಡೆದ ಸೆಮಿಫೈನಲ್‌ನಲ್ಲಿ ಭಾರತದ ತಂಡ, ಸ್ಪೇನ್ ತಂಡವನ್ನು ೬-೨ ಅಂತರದಿಂದ ಸೋಲಿಸಿತು. ಭಾನುವಾರ ಸಂಜೆ ನಡೆಯುವ ಫೈನಲ್‌ನಲ್ಲಿ ಅವರು ಚೀನಾವನ್ನು ಎದುರಿಸಲಿದ್ದಾರೆ.

<><><>

ಚೆನ್ನೈನ ಎಂ.ಎ.ಚಿದಂಬರಂ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಇಂಡಿಯನ್ ಪ್ರೀಮಿಯರ್ ಲೀಗ್-ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ಹಾಗೂ ಕೋಲ್ಕತ್ತಾ ನೈಟ್ ರೈಡರ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭:೩೦ ಕ್ಕೆ ಆರಂಭವಾಗಲಿದೆ. ಗಾಯದ ಕಾರಣದಿಂದಾಗಿ ಋತುರಾಜ್ ಗಾಯಕ್‌ವಾಡ್ ಪಂದ್ಯವಳಿಯಿಂದ ಹೊರಗುಳಿದ ಪರಿಣಾಮ ಪ್ರಸ್ತುತ ನಡೆಯುತ್ತಿರುವ ಇಂಡಿಯನ್ ಪ್ರೀಮಿಯರ್ ಲೀಗ್-ಐಪಿಎಲ್ ಪಂದ್ಯಾವಳಿಯ ಮುಂದಿನ ಪಂದ್ಯಗಳಲ್ಲಿ ಚೆನ್ನೈ ಸೂಪರ್ ಕಿಂಗ್ ತಂಡದ ನಾಯಕನ ಸ್ಥಾನವನ್ನು ಮಹೇಂದ್ರ

ಸಿಂಗ್ ಧೋನಿ ವಹಿಸಲಿದ್ದಾರೆ ಎಂದು ಚೆನ್ನೈ ಸೂಪರ್ ಕಿಂಗ್ ತಂಡದ ಕೋಚ್ ಸ್ಟೀಫನ್ ಫ್ಲೆಮಿಂಗ್ ಮಾಹಿತಿ ನೀಡಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>